<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

**<u>ಸಿ.ಸಿ.ಸಂಖ್ಯೆ:72/2026</u>**

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಾಳೂರು ಪೊಲೀಸ್ ಠಾಣೆ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

<u>ಆರೋಪಿ</u> : ಸುರೇಶ್.ಎನ್.ಬಿ, ವಯಸ್ಸು ಸುಮಾರು 60 ವರ್ಷ,
ಬಿನ್ ದಿಃ ಎನ್.ಹೆಚ್.ಬೆಳ್ಳೇಗೌಡ,
ವಾಸಃ ನಡ್ವಳ್ಳಿ ಕೂವೆ ಗ್ರಾಮ,
ಗಬ್ಗಲ್ ಅಂಚೆ, ಬಾಳೂರು ಹೋಬಳಿ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

<u>ದೋಷಾರೋಪಣೆ</u>

ಶ್ರೀಮತಿ ಸುರಕ್ಷ ಕೆ.ಕೆ., C/c ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 14.12.2025 ರಂದು ಬೆಳಗ್ಗೆ 10.00 ರ ಸಮಯದಲ್ಲಿ ಚಾಸಾ8-ಹರೀಶ ರವರ ಮಾಲೀಕತ್ವದಲ್ಲಿರುವ ವಾಹನ ನೋಂದಣಿ ಕೆಎ-18-ಡಬ್ಲೂ-5072 ನೇ ಹೀರೋ ಸ್ಪ್ಲೆಂಡರ್ ಬೈಕ್ ಅನ್ನು ಚಾಸಾ2-ಸಂಜೀವ ರವರು ಹಿಂಬದಿ ಸೀಟಿನಲ್ಲಿ ಚಾಸಾ3-ಅವಿನಾಶ್ ರವರನ್ನು ಕೂರಿಸಿಕೊಂಡು ಮರ್ಕಲ್ ಗ್ರಾಮದಿಂದ ಮಾಗುಂಡಿಗೆ ಕೆಲಸಕ್ಕೆ ಹೋಗಲು ಬೈಕ್ ಚಾಲನೆ ಮಾಡಿಕೊಂಡು ಬೆಳಗ್ಗೆ 11.00 ಗಂಟೆಗೆ ಹೋಗುತ್ತಿರುವಾಗ, ದಾರಿ ಮಧ್ಯೆ ಕೂವೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಾದಿಓಣಿ ಬಸ್ ನಿಲ್ದಾಣದಿಂದ ಸ್ವಲ್ಪ ಮುಂದೆ ಹಾದು ಹೋಗಿರುವ ಹೊರನಾಡಿನಿಂದ ಕೊಟ್ಟಿಗೆಹಾರಕ್ಕೆ ಎನ್.ಹೆಚ್-66 ಟಾರು ರಸ್ತೆಯ ಒಂದು ತಿರುವು ರಸ್ತೆಯ ಎಡಬದಿಯಲ್ಲಿ ಮೋಟಾರ್ ಬೈಕ್ ಚಾಲನೆ ಮಾಡುತ್ತಿದ್ದ ಚಾಸಾ2 ರವರ ಮೋಟಾರ್ ಬೈಕ್ ಗೆ ಎದುರುಗಡೆಯಿಂದ ಅಂದರೆ ಮಾಗುಂಡಿ ಕಡೆಯಿಂದ ಗಬ್ಗಲ್ ಕಡೆಗೆ ಬರುತ್ತಿದ್ದ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆಃ ಕೆಎ-18-ಎನ್-1309 ನೇ ಮಾರುತಿ ಕಾರನ್ನು ಅತೀವೇಗ, ದುಡುಕು ಮತ್ತು ನಿರ್ಲಕ್ಷ್ಯತನದಿಂದ ಮಾನವ ಪ್ರಾಣಕ್ಕೆ ಅಪಾಯಕರ ರೀತಿಯಲ್ಲಿ ಚಲಾಯಿಸಿಕೊಂಡು ಬಂದಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಬೈಕ್ ಗೆ ಡಿಕ್ಕಿಪಡಿಸಿದ ಪರಿಣಾಮ ಚಾಸಾ2 ರವರು ಬೈಕ್ ಸಮೇತ ಟಾರು ರಸ್ತೆಯ ಮೇಲೆ ಬಿದ್ದಾಗ ಅವರಿಗೆ Types open regmenta fracter of tibir and fibula ಗಳಂತ ಸಾಮಾನ್ಯ ಮತ್ತು ತೀವ್ರ ಸ್ವರೂಪದ ಗಾಯಗಳನ್ನುಂಟು ಮಾಡಿಕೊಂಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(**ಎ**)** ಮತ್ತು **125(**ಬಿ**)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ*,* ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ***?*** ಅವುಗಳು ನಿಮಗೆ ಅರ್ಥವಾಯಿತೇ***?***

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ***?***

ಆರೋಪಿಯ ಉತ್ತರಃ

***(***ಆರೋಪಿಗೆ ದಿನಾಂಕ 06.03.2026 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ*,* ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು*.* ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

Sd/-

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕಃ 06.03.2026.